# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೋನಿಯಾ ಎಜುಕೇಷನ್ ಟ್ರಸ್ಟ್, ಧಾರವಾಡ ಇವರು ಬೆಳಗಾವಿ ಜಿಲ್ಲೆಯ ಕಾಗವಾಡದಲ್ಲಿ ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಅಧ್ಯಕ್ಷರು, ಸೋನಿಯಾ ಎಜುಕೇಷನ್ ಟ್ರಸ್ಟ್, ಧಾರವಾಡ ಇವರ ಮನವಿ ಪತ್ರ ದಿನಾಂಕ:13.11.2018.
2. ಔಷಧ ನಿಯಂತ್ರಕರು (ಪ್ರ) ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/179/ಯೋಜನೆ/2018-19, ದಿನಾಂಕ: 04.05.2019.
3. ದಿನಾಂಕ:28.05.2019ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಗಳು.
4. ಅಧ್ಯಕ್ಷರು, ಸೋನಿಯಾ ಎಜುಕೇಷನ್ ಟ್ರಸ್ಟ್, ಧಾರವಾಡ ಇವರ ಮನವಿ ಪತ್ರ ದಿನಾಂಕ:06.07.2019.
5. ಔಷಧ ನಿಯಂತ್ರಕರು , ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/179/ಯೋಜನೆ/2018-19, ದಿನಾಂಕ:11.09.2019.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಮನವಿ ಪತ್ರದಲ್ಲಿ, ಅಧ್ಯಕ್ಷರು, ಸೋನಿಯಾ ಎಜುಕೇಷನ್ ಟ್ರಸ್ಟ್, ಸಂಗೊಳ್ಳಿ ರಾಯಣ್ಣ ನಗರ, ಮೈಕ್ರೋವೇವ್ ಟವರ್ ಹತ್ತಿರ, ಧಾರವಾಡ ಇವರು ತಮ್ಮ ಟ್ರಸ್ಟ್ ವತಿಯಿಂದ ಈಗಾಗಲೇ ಧಾರವಾಡದಲ್ಲಿ ಔಷಧೀಯ ವಿದ್ಯಾಲಯವನ್ನು ನಡೆಸುತ್ತಿದ್ದು, ಪ್ರಸ್ತುತ ಉತ್ತರ ಕರ್ನಾಟಕ ಗಡಿಭಾಗವಾದ ಬೆಳಗಾವಿ ಜಿಲ್ಲೆಯ ಕಾಗವಾಡ ಗ್ರಾಮದಲ್ಲಿ ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ವರದಿಯಲ್ಲಿ, ಔಷಧ ನಿಯಂತ್ರಕರು (ಪ್ರ), ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಸೋನಿಯಾ ಎಜುಕೇಷನ್ ಟ್ರಸ್ಟ್, ಧಾರವಾಡ ಇವರು ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸದರಿ ಸಂಸ್ಥೆಯು ಸರ್ವೆ ನಂ. 21ಎ/4, ಕಾಗವಾಡ, ಅಥಣಿ ಇಲ್ಲಿ ತಮ್ಮ ಕಟ್ಟಡವನ್ನು ಹಾಗೂ ಆಸ್ತಿ ಸಂಖ್ಯೆ: 21/ಎ/2875, ಸರ್ವೆ ನಂ. 21ಎ/4, ಕಾಗವಾಡ, ಅಥಣಿ ಇಲ್ಲಿ ಒಟ್ಟು 01 ಎಕರೆ ಜಮೀನನ್ನು ಹೊಂದಿರುತ್ತದೆ. ಸದರಿ ಕಟ್ಟಡವು ಡಿ.ಫಾರ್ಮಸಿ ಕೋರ್ಸ್ ನಡೆಸಲು ಸೂಕ್ತವಾಗಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮಸಿ ಕೋರ್ಸ್‌ನ್ನು ಚಾಲನೆ ಮಾಡಲು ಬೇಕಾಗುವ ಮೂಲಭೂತ ಸೌಕರ್ಯಗಳು ಹಾಗೂ ಇನ್ನಿತರೆ ಅಗತ್ಯ ಸೌಲಭ್ಯಗಳನ್ನು ಒಳಗೊಂಡಿರುವುದರಿಂದ, ಸದರಿ ಸಂಸ್ಥೆಗೆ 2019-20ನೇ ಶೈಕ್ಷಣಿಕ ಸಾಲಿನಿಂದ ಸೋನಿಯ ಎಜುಕೇಷನ್ ಟ್ರಸ್ಟ್‌ನ ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ ಉನ್ನತ ಸಮಿತಿಯಲ್ಲಿ ವರದಿಯನ್ನು ಪರಿಶೀಲಿಸಿ, ತೀರ್ಮಾನಿಸಬಹುದಾಗಿದೆ ತೀರ್ಮಾನಿಸಬಹುದಾಗಿದೆ ಎಂಬ ಅಭಿಪ್ರಾಯವನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

. . . 2

ಮೇಲೆ ಓದಲಾದ ಕ್ರ.ಸಂ (3)ರ ಉನ್ನತ ಮಟ್ಟದ ಸಮಿತಿಯ ಸಭೆಯಲ್ಲಿ, ಈ ಸಂಸ್ಥೆಗೆ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನಿರಾಕರಿಸಲು ಶಿಫಾರಸು ಮಾಡಲಾಗಿದೆ.

ಮೇಲೆ ಓದಲಾದ ಕ್ರ.ಸಂ (4)ರ ಮನವಿ ಪತ್ರದಲ್ಲಿ, ಅಧ್ಯಕ್ಷರು, ಸೋನಿಯ ಎಜುಕೇಷನ್ ಟ್ರಸ್ಟ್, ಧಾರವಾಡ ಇವರು ತಮ್ಮ ಕಾಲೇಜಿನ ಪರಿವೀಕ್ಷಣೆಯ ಸಮಯದಲ್ಲಿ ಟ್ರಸ್ಟ್ 01 ಎಕರೆ ಜಮೀನು ಮಾತ್ರ ಹೊಂದಿದ್ದು, ಅನಂತರ 2 1/2 (ಎರಡೂವರೆ) ಎಕರೆ ಜಮೀನು ಅಗತ್ಯವಿದೆ ಎಂದು ತಿಳಿದಿದ್ದು, ಹೆಚ್ಚುವರಿಯಾಗಿ 01 ಎಕರೆ 37 ಗುಂಟೆ ಜಮೀನನ್ನು ಕಾಲೇಜಿಗೆ ಹೊಂದಿಕೊಂಡಂತೆ ಒದಗಿಸಲಾಗಿದ್ದು, ಇದನ್ನು ಪರಿಗಣಿಸಿ 2019-20ನೇ ಶೈಕ್ಷಣಿಕ ಸಾಲಿಗೆ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (5)ರ ವರದಿಯಲ್ಲಿ, ಔಷಧ ನಿಯಂತ್ರಕರು, ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಸೋನಿಯ ಎಜುಕೇಷನ್ ಟ್ರಸ್ಟ್, ಧಾರವಾಡ ಇವರು ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸಂಸ್ಥೆಯು ಆಸ್ತಿ ಸಂಖ್ಯೆ: 21/ಎ/2875, ಸರ್ವೆ ನಂ. 21ಎ/4, ಕಾಗವಾಡ ಅಥಣಿ ಇಲ್ಲಿ 01 ಎಕರೆ ಜಮೀನನ್ನು ಹೊಂದಿದ್ದು, ಹೆಚ್ಚುವರಿಯಾಗಿ 37 ಗುಂಟೆ ಜಾಗವನ್ನು ಎಸ್.ಆರ್. ನಂ. 21/2ಎ, ಕಾಗವಾಡ ಅಥಣಿ ಮತ್ತು 39 ಗುಂಟೆ ಜಾಗವನ್ನು ಸಂಖ್ಯೆ: 936/2ಎ ಕಾಗವಾಡ ಅಥಣಿ ಇಲ್ಲಿ ಶೈಕ್ಷಣಿಕ ಉದ್ದೇಶಕ್ಕಾಗಿ ಭೋಗ್ಯಕ್ಕೆ ಪಡೆದಿದ್ದು, ಸಂಸ್ಥೆಯ ಹೆಸರಿನಲ್ಲಿ ಒಟ್ಟು 2.9 ಎಕರೆಗಳ ಜಾಗವಿದ್ದು, ಭಾರತೀಯ ಫಾರ್ಮಸಿ ಪರಿಷತ್ತು ಅನುಮತಿ ನೀಡಿದ್ದು, ಅಗತ್ಯ ಮೂಲಸೌಕರ್ಯಗಳನ್ನು ಹೊಂದಿರುವುದನ್ನು ಪರಿಗಣಿಸಿ, 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ ಉನ್ನತ ಸಮಿತಿಯಲ್ಲಿ ವರದಿಯನ್ನು ಪರಿಶೀಲಿಸಿ, ತೀರ್ಮಾನಿಸಬಹುದಾಗಿದೆ ತೀರ್ಮಾನಿಸಬಹುದಾಗಿದೆ ಎಂಬ ಅಭಿಪ್ರಾಯವನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಔಷಧ ನಿಯಂತ್ರಕರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಸೋನಿಯ ಎಜುಕೇಷನ್ ಟ್ರಸ್ಟ್, ಧಾರವಾಡ ಇವರು ಕಾಗವಾಡ, ಅಥಣಿ ತಾಲ್ಲೂಕು ಇಲ್ಲಿ ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಪ್ರಥಮ ಡಿ.ಫಾರ್ಮಸಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 306 ಪಿಟಿಡಿ 2018, ಬೆಂಗಳೂರು, ದಿನಾಂಕ:20.09.2019.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸೋನಿಯಾ ಎಜುಕೇಷನ್ ಟ್ರಸ್ಟ್, ಸಂಗೊಳ್ಳಿ ರಾಯಣ್ಣ ನಗರ, ಮೈಕ್ರೋವೇವ್ ಟವರ್ ಹತ್ತಿರ, ಧಾರವಾಡ ಇವರು ಸರ್ವೆ ನಂ. 21ಎ/4, ಕಾಗವಾಡ ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ರೂರಲ್ ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.

2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
9. ಸಂಸ್ಥೆಯು ಇಂದಿನಿಂದ 05 ವರ್ಷದೊಳಗಾಗಿ ಸ್ವಂತ ಕಟ್ಟಡವನ್ನು ನಿರ್ಮಿಸಿಕೊಳ್ಳತಕ್ಕದ್ದು.
10. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರು ಉನ್ನತ ಮಟ್ಟದ ಸಮಿತಿ ಸಭೆಯ ನಿರ್ಣಯದಂತೆ ಡಿ.ಫಾರ್ಮಸಿ ಕೋರ್ಸ್‌ನ್ನು ಪ್ರಾರಂಭಿಸಲು ಅಗತ್ಯವಿರುವ ಮೊತ್ತವನ್ನು ಸಂಸ್ಥೆಯು ಬ್ಯಾಂಕ್ ಖಾತೆಯಲ್ಲಿ ಹೊಂದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳತಕ್ಕದ್ದು.
11. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಪುಷ್ಪ)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

<u>ಇವರಿಗೆ:</u>

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.

. . . 4

3) ಅಧ್ಯಕ್ಷರು, ಸೋನಿಯಾ ಎಜುಕೇಷನ್ ಟ್ರಸ್ಟ್, ಸಂಗೊಳ್ಳಿ ರಾಯಣ್ಣ ನಗರ, ಮೈಕ್ರೋವೇವ್ ಟವರ್ ಹತ್ತಿರ, ಧಾರವಾಡ.

ಪ್ರತಿಗಳು:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.